# Akashvani : Bangalore

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**26.07.2024 / 14.30  hrs**

ಮುಖ್ಯಾಂಶಗಳು

**೧. ರಾಜ್ಯದಲ್ಲಿ ಮಳೆ ಅಬ್ಬರ; ಜನಜೀವನ ಬಾಧಿತ- ಹಲವೆಡೆ ಶಾಲಾ-ಕಾಲೇಜು, ಅಂಗನವಾಡಿಗಳಿಗೆ ರಜೆ**

**೨. ಇ-ಸ್ವತ್ತು ತೊಂದರೆ ನಿವಾರಿಸಲು ಸರ್ಕಾರದಿಂದ ಹೊಸ ತಂತ್ರಾಂಶ ಅನುಷ್ಠಾನ**

**೩. ಕಾರ್ಗಿಲ್ ವಿಜಯ ದಿನಾಚರಣೆ; ಭಾರತೀಯ ಯೋಧರ ತ್ಯಾಗ-ಬಲಿದಾನ ಸ್ಮರಣೆ**

**೪. ಐತಿಹಾಸಿಕ ಬೆಳಗಾವಿ ಅಧಿವೇಶನಕ್ಕೆ ೧೦೦ ವರ್ಷ; ರಾಜ್ಯದ ಹಲವೆಡೆ ಅರ್ಥಪೂರ್ಣ ಕಾರ್ಯಕ್ರಮ - ಡಿ.ಕೆ.ಶಿವಕುಮಾರ್**

**<><*<><>*><>**

ರಾಜ್ಯದ ಅನೇಕ ಜಿಲ್ಲೆಗಳಲ್ಲಿ ಮಳೆ ಅಬ್ಬರ ಮುಂದುವರಿದಿದ್ದು, ಪ್ರಮುಖ ನದಿಗಳು ಮತ್ತು ಜಲಾಶಯಗಳು ತುಂಬಿ ಹರಿಯುತ್ತಿವೆ. ಅನೇಕ ಕಡೆ ಶಾಲೆ ಮತ್ತು ಅಂಗನವಾಡಿಗಳಿಗೆ ರಜೆ ಘೋಷಿಸಲಾಗಿದೆ. ವಾಹನಗಳ ಮೇಲೆ ಮರಗಳು ಬಿದ್ದು, ಸಂಚಾರಕ್ಕೆ ಅಡಚಣೆಯಾಗಿರುವ ಘಟನೆಗಳು ವರದಿಯಾಗಿವೆ. ಕೊಡಗು ಜಿಲ್ಲೆಯಲ್ಲಿ ಧಾರಾಕಾರ ಮಳೆ ಮುಂದುವರೆದಿದೆ, ಇದರಿಂದಾಗಿ ಅನೇಕ ಮರಗಳು ಉರುಳಿಬಿದ್ದು, ಕೆಲವು ಕಡೆ ಸಂಚಾರಕ್ಕೆ ತೊಂದರೆಯಾಗಿದೆ. ಶ್ರೀಮಂಗಲ-ಕುಟ್ಟ ರಾಜ್ಯ ಹೆದ್ದಾರಿಯಲ್ಲಿಯೂ ಮರ ಬಿದ್ದ ಪರಿಣಾಮ ಕೆಲ ಕಾಲ ರಸ್ತೆ ಸಂಚಾರ ವ್ಯತ್ಯಯವಾಗಿದೆ, ಜಿಲ್ಲೆಯ ಗ್ರಾಮೀಣ ಭಾಗಗಳಲ್ಲಿ ವಿದ್ಯುತ್ ತಂತಿ ಮತ್ತು ಕಂಬಗಳ ಮೇಲೆ ಮರಗಳು ಬಿದ್ದ ಪರಿಣಾಮ ವಿದ್ಯುತ್ ಸಂಪರ್ಕ ಕಡಿತಗೊಂಡಿದೆ, ಅನೇಕ ಮನೆಗಳು ಬಿರುಕುಬಿಟ್ಟಿದ್ದು ಹಾನಿಯಾಗಿದೆ. ಹಾರಂಗಿ ಜಲಾಶಯದಲ್ಲಿ ಪ್ರಸ್ತುತ ೨೮೫೫,೮೮ ಅಡಿ ನೀರಿನ ಸಂಗ್ರಹವಿದ್ದು, ಜಲಾಶಯಕ್ಕೆ ೧೦ ಸಾವಿರ ಕ್ಯೂಸೆಕ್ ನೀರಿನ ಒಳಹರಿವಿದ್ದು, ಜಲಾಶಯದಿಂದ ನದಿಗೆ ೧೪ ಸಾವಿರ ಕ್ಯೂಸೆಕ್ ನೀರನ್ನು ಬಿಡಲಾಗುತ್ತಿದೆ, ಮಳೆಯಿಂದಾಗಿ ಇಂದು ಕೂಡ ಜಿಲ್ಲೆಯ ಶಾಲಾ ಕಾಲೇಜುಗಳಿಗೆ ಜಿಲ್ಲಾಡಳಿತ ಮುಂಜಾಗ್ರತಾ ಕ್ರಮವಾಗಿ ರಜೆ ನೀಡಿದೆ. ಮಂಡ್ಯ ಜಿಲ್ಲೆಯ ಕೆಆರ್‌ಎಸ್ ಜಲಾಶಯ ಭರ್ತಿಯಾಗಿದ್ದು, ಜಲಾಶಯದಿಂದ ಒಂದು ಲಕ್ಷಕ್ಕೂ ಹೆಚ್ಚು ಕ್ಯೂಸೆಕ್ ನೀರು ಹರಿಬಿಡಲಾಗುತ್ತಿದ್ದು, ಕಾವೇರಿ ನದಿ ಉಕ್ಕಿ ಹರಿಯುತ್ತಿದೆ. ಶ್ರೀರಂಗಪಟ್ಟಣದ ರಂಗನತಿಟ್ಟು, ಪಕ್ಷಿಧಾಮ, ವೆಲ್ಲೆಸ್ಲಿ ಸೇತುವೆ, ನಿಮಿಷಾಂಭ ದೇಗುಲದ ಮುಂಭಾಗದ ಪ್ರದೇಶ ಮುಳುಗಡೆಯಾಗಿದ್ದು, ಸುರಕ್ಷತೆಯ ದೃಷ್ಟಿಯಿಂದ ಸಾರ್ವಜನಿಕರ ಪ್ರವೇಶ ನಿಷೇಧಿಸಲಾಗಿದೆ. ಉತ್ತರ ಕನ್ನಡ ಜಿಲ್ಲೆಯ ಮುಂಡಗೋಡ ತಾಲೂಕಿನ ಮಳಗಿ ಸಮೀಪದ ಧರ್ಮಾ ಜಲಾಶಯ ಭರ್ತಿಯಾಗಿದ್ದು, ಜಲಾಶಯಕ್ಕೆ ಸಾರ್ವಜನಿಕರ ಪ್ರವೇಶವನ್ನು ನಿರ್ಬಂಧಿಸಲಾಗಿದೆ. ಮಳೆಯ ಅಬ್ಬರ ಹೆಚ್ಚಾಗಿರುವುದರಿಂದ ಜಲಾಶಯಕ್ಕೆ ಇಳಿಯದಂತೆ ತಹಸೀಲ್ದಾರ್ ಎಚ್ಚರಿಕೆ ನೀಡಿದ್ದಾರೆ. ಹಾಸನ ಜಿಲ್ಲೆಯ ಹೇಮಾವತಿ ಜಲಾಶಯದಿಂದ ಹೆಚ್ಚಿನ ಪ್ರಮಾಣದ ನೀರನ್ನು ನದಿಗೆ ಬಿಡುತ್ತಿರುವುದರಿಂದ ತಗ್ಗು ಪ್ರದೇಶದಲ್ಲಿ ವಾಸ ಮಾಡುವ ಜನರು ಸುರಕ್ಷಿತ ಸ್ಥಳಗಳಿಗೆ ತೆರಳುವಂತೆ ಹೇಮಾವತಿ ಜಲಾಶಯದ ಕಾರ್ಯಪಾಲಕ ಇಂಜಿನಿಯರ್ ಮನವಿ ಮಾಡಿದ್ದಾರೆ. ಹಾವೇರಿ ಜಿಲ್ಲೆಯಲ್ಲಿ ನಿರಂತರವಾಗಿ ಮಳೆ ಸುರಿಯುತ್ತಿರುವುದರಿಂದ ೭೪೯ ಮನೆಗಳಿಗೆ ಹಾನಿಯಾಗಿದೆ ಎಂದು ಜಿಲ್ಲಾಧಿಕಾರಿ ವಿಜಯ ಮಾಹಂತೇಶ ದಾನಮ್ಮನವರ ಮಾಹಿತಿ ನೀಡಿದ್ದಾರೆ. ಜಿಲ್ಲೆಯಲ್ಲಿ ಉಂಟಾಗುವ ಎಲ್ಲ ವಿಪತ್ತುಗಳನ್ನು ಎದುರಿಸಲು ಜಿಲ್ಲಾಡಳಿತ ಸನ್ನದ್ಧವಾಗಿದೆ ಎಂದರು. ಚಿಕ್ಕಮಗಳೂರು ಜಿಲ್ಲೆಯಲ್ಲಿ ಮಳೆ ಮತ್ತು ಬಿರುಗಾಳಿಯಿಂದ ಅನೇಕ ಮರಗಳು ಉರುಳಿಬಿದ್ದು, ಜನಜೀವನಕ್ಕೆ ತೊಂದರೆಯಾಗಿದೆ. ಚಿಕ್ಕಮಗಳೂರು, ಮೂಡಿಗೆರೆ, ಕೊಪ್ಪ, ಶೃಂಗೇರಿ, ಎನ್.ಆರ್.ಪುರ, ಕಳಸ ತಾಲೂಕಿನ ಅಂಗನವಾಡಿ ಕೇಂದ್ರಗಳು ಹಾಗೂ ಶಾಲೆಗಳಿಗೆ ಜಿಲ್ಲಾಡಳಿತ ರಜೆ ಘೋಷಿಸಿದೆ. ಮಲೆನಾಡು ಭಾಗದಲ್ಲಿ ವ್ಯಾಪಕ ಮಳೆಯಿಂದ ಕಳಸಾ-ಹೊರಡಾನು ಸಂಪರ್ಕಿಸುವ ಹೆಬ್ಬಾಳೆ ಸೇತುವೆ ಮುಳುಗಡೆಯಾಗಿದೆ. ಜಿಲ್ಲೆಯ ಅನೇಕ ಕೆರೆಗಳು ತುಂಬಿ ಹರಿಯುತ್ತಿವೆ. ಮಹಾರಾಷ್ಟ್ರದ ಘಟ್ಟ ಪ್ರದೇಶ ಸೇರಿದಂತೆ ಅನೇಕ ಕಡೆಗಳಲ್ಲಿ ಮಳೆ ಆರ್ಭಟ ಮುಂದುವರಿದ ಪರಿಣಾಮ ಕೃಷ್ಣಾ ನದಿಗೆ ಒಳ ಹರಿವು ಹೆಚ್ಚಾಗಿದೆ.

ಸದ್ಯ ಮಹಾರಾಷ್ಟ್ರದ ಕೊಯ್ನಾ ಜಲಾಶಯದಿಂದ ಸುಮಾರು ೧೦ ಸಾವಿರ ಕ್ಯೂಸೆಕ್ ನೀರು ಬಿಡುಗಡೆ ಮಾಡಲಾಗುತ್ತಿದೆ ಎಂದು ಬೆಳಗಾವಿ ಜಿಲ್ಲಾಧಿಕಾರಿ ಮೊಹಮ್ಮದ್ ರೋಷನ್ ಮಾಹಿತಿ ನೀಡಿದ್ದಾರೆ. ಜಿಲ್ಲೆಯ ಪರಿಸ್ಥಿತಿಯ ಕುರಿತು ಮಾಹಿತಿ ನೀಡಿದ ಅವರು, ಸದ್ಯಕ್ಕೆ ೩೫ ದೋಣಿಗಳು ಲಭ್ಯವಿದ್ದು, ಅವಶ್ಯಕತೆ ಬಿದ್ದಲ್ಲಿ ಹೆಚ್ಚಿನ ದೋಣಿಗಳನ್ನು ತರಿಸಲಾಗುವುದು ಎಂದರು. ಮಹಾರಾಷ್ಟ್ರದಲ್ಲಿ ಮೂರು ದಿನ ರೆಡ್ ಅಲರ್ಟ್ ಘೋಷಿಸಲಾಗಿದ್ದು, ನೀರು ಬಿಡುಗಡೆ ಕುರಿತು ಅಲ್ಲಿನ ಅಧಿಕಾರಿಗಳೊಂದಿಗೆ ಸಮನ್ವಯ ಸಾಧಿಸಿಕೊಂಡು ಪರಸ್ಪರ ಮಾಹಿತಿ ವಿನಿಮಯ ಮಾಡಿಕೊಳ್ಳಲಾಗುತ್ತಿದೆ ಎಂದು ಜಿಲ್ಲಾಧಿಕಾರಿ ವಿವರಿಸಿದರು.

<><*<><>*><>

ನಾಳೆಯಿಂದ ಮೂರು ದಿನ ಇ-ಸ್ವತ್ತು ತಂತ್ರಾಂಶ ಸ್ಥಗಿತವಾಗುತ್ತಿದ್ದು, ಜನರ ಅನುಕೂಲಕ್ಕಾಗಿ ಹೊಸ ತಂತ್ರಾಂಶದ ಅವತರಣಿಕೆ ಅನುಷ್ಠಾನಗೊಳಿಸಲಾಗುವುದು ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಪ್ರಿಯಾಂಕ್ ಖರ್ಗೆ ಹೇಳಿದ್ದಾರೆ. ಈ ಕುರಿತು ಹೇಳಿಕೆ ನೀಡಿರುವ ಅವರು, ಸಾರ್ವಜನಿಕರಿಗೆ ಆಗುತ್ತಿರುವ ಅನಾನುಕೂಲ ನಿವಾರಿಸಲು ತಂತ್ರಾಂಶ ಕಾರ್ಯಾರಂಭಿಸಿದ ನಂತರ ಸೇವಾ ಅವಧಿಯನ್ನು ಆಗಸ್ಟ್ ೨ರವರೆಗೆ ಪ್ರತಿನಿತ್ಯ ೮ ಗಂಟೆವರೆಗೂ ವಿಸ್ತರಿಸಲಾಗುವುದು. ಸಾರ್ವಜನಿಕರು ಸಹಕರಿಸಬೇಕು ಎಂದು ಮನವಿ ಮಾಡಿದ್ದಾರೆ. ಈ ತಂತ್ರಾಂಶದ ಮೂಲಕ ಸಾರ್ವಜನಿಕರ ಆಸ್ತಿಯನ್ನು ಗ್ರಾಮ ಠಾಣಾದ ಒಳಗೆ ಅಥವಾ ಹೊರಗೆ ಅಳತೆ ಮಾಡಿಸುವ ಪ್ರಕ್ರಿಯೆಯನ್ನು ಗ್ರಾಮ ಪಂಚಾಯಿತಿಯ ಹಂತದಲ್ಲಿ 'ದಿಶಾಂಕ್' ಆಪ್ ಮೂಲಕ ನಿರ್ವಹಿಸಲು ಕ್ರಮ ಕೈಗೊಳ್ಳಲಾಗುತ್ತದೆ ಎಂದು ಸಚಿವರು ಹೇಳಿದ್ದಾರೆ.

<><*<><>*><>

ಮುಖ್ಯಮಂತ್ರಿ ಸಿದ್ದರಾಮಯ್ಯ ಅಧ್ಯಕ್ಷತೆಯಲ್ಲಿ ರಾಜ್ಯ ಸಚಿವ ಸಂಪುಟ ಸಭೆ ನಡೆಯುತ್ತಿದೆ. ಸದ್ಯ, ರಾಜ್ಯದಲ್ಲಿ ಎದುರಾಗಿರುವ ಭೀಕರ ಮಳೆ, ನೆರೆ ಇನ್ನಿತರ ವಿಷಯಗಳ ಕುರಿತು ಸಂಪುಟ ಸಭೆಯಲ್ಲಿ ಚರ್ಚಿಸುವ ಸಾಧ್ಯತೆಯಿದೆ ಎಂದು ಉನ್ನತ ಮೂಲಗಳು ತಿಳಿಸಿವೆ.

<><*<><>*><>

ಕಾರ್ಗಿಲ್ ವಿಜಯ ದಿವಸದ ಅಂಗವಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಬೆಂಗಳೂರಿನಲ್ಲಿರುವ ಹುತಾತ್ಮ ಸೈನಿಕರ ಸ್ಮಾರಕಕ್ಕೆ ಇಂದು ಗೌರವ ನಮನ ಸಲ್ಲಿಸಿದರು. ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಕಾರ್ಗಿಲ್ ವಿಜಯ ದಿನವನ್ನು ಇಂದು ಆಚರಿಸಲಾಗುತ್ತಿದೆ. ಚಿತ್ರದುರ್ಗದಲ್ಲಿ ವಿವಿಧ ಸಂಘಟನೆಗಳು ಮತ್ತು ನಿವೃತ್ತ ಯೋಧರು ಮೆರವಣಿಗೆ ಮೂಲಕ ಸಾಗಿ, ಕಾರ್ಗಿಲ್ ಸಮರದಲ್ಲಿ ಹುತಾತ್ಮರಾದ ಯೋಧರ ಸೇವೆಯನ್ನು ಸ್ಮರಿಸಿದರು. ಚಿಕ್ಕಮಗಳೂರುನಲ್ಲಿ ಕಾರ್ಗಿಲ್ ವಿಜಯ ಜ್ಯೋತಿ ರಥಾ ಯಾತ್ರೆ ನಡೆಯಿತು. ನಿವೃತ ಯೋದರು, ಸಾರ್ವಜನಿಕರು ಪಾಲ್ಗೊಂಡಿದ್ದರು. ದಾವಣಗೆರೆಯಲ್ಲಿಂದು ವಿವಿಧ ಕಾರ್ಯಕ್ರಮಗಳನ್ನು ಆಯೋಜಿಸಲಾಗಿತ್ತು. ಮಾಜಿ ಸೈನಿಕರು ನಗರದಲ್ಲಿ ಬೃಹತ್ ಮೆರವಣಿಗೆ ನಡೆಸಿ, ನಂತರ ಸೈನಿಕರ ಉದ್ಯಾನವನದಲ್ಲಿ ಹುತಾತ್ಮ ಯೋಧರಿಗೆ ಪುಷ್ಪ ನಮನ ಸಲ್ಲಿಸಿದರು. ಯುವ ಬ್ರಿಗೇಡ್ ಮತ್ತು ಪ್ರೇರಣ ಅಕಾಡೆಮಿಯಿಂದ ಮ್ಯಾರಾಥಾನ್ ಮೂಲಕ ಹುತಾತ್ಮ ಸೈನಿಕರ ಸೇವೆಯನ್ನು ಸ್ಮರಿಸಲಾಯಿತು. ಅಮರ್ ಜವಾನ್ ಉದ್ಯಾನವದಲ್ಲಿ ೨೦೦ ಸಸಿಗಳನ್ನು ನಡೆಲಾಯಿತು. ಗದಗಿನ ಕೆ.ಎಚ್. ಪಾಟೀಲ ಸಭಾಭವನದಲ್ಲಿ ನಡೆದ ಕಾರ್ಯಕ್ರಮದಲ್ಲಿ ದೇಶಕ್ಕಾಗಿ ಹೋರಾಡಿ, ಹುತಾತ್ಮರಾದ ಯೋಧರಿಗೆ ನಮನ ಸಲ್ಲಿಸಲಾಯಿತು. ಈ ಸಂದರ್ಭದಲ್ಲಿ ಕಾಲೇಜು ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು. ಕೊಡಗು ಜಿಲ್ಲೆಯಲ್ಲಿ ಕಾರ್ಗಿಲ್ ವಿಜಯ ದಿನಾಚರಣೆಯನ್ನು ಆಚರಿಸಲಾಯಿತು. ಮಡಿಕೇರಿಯಲ್ಲಿನ ಜನರಲ್ ತಿಮ್ಮಯ್ಯ ಸ್ಮಾರಕ ಭವನದಲ್ಲಿರುವ ಅಮರ್ ಜವಾನ್ ಸ್ಮಾರಕ, ಮಡಿಕೇರಿಯ ಮುಖ್ಯ ರಸ್ತೆಯಲ್ಲಿರುವ ಯುದ್ಧ ಸ್ಮಾರಕಗಳಲ್ಲಿ ವಿವಿಧ ಸಂಸ್ಥೆಗಳು ಪುಷ್ಪ ನಮನ ಹಾಗೂ ಯೋಧರಿಗೆ ಸನ್ಮಾನ ಕಾರ್ಯಕ್ರಮ ಆಯೋಜಿಸಿದ್ದವು. ಇದರ ಅಂಗವಾಗಿ ರಕ್ತದಾನ ಶಿಬಿರ ನಡೆಯಿತು. ಮಾಜಿ ಸೈನಿಕರು ಸೇರಿದಂತೆ ನೂರಾರು ಜನರು ಮಳೆಯ ನಡುವೆಯೂ ಭಾಗಿಯಾಗಿ ಕಾರ್ಗಿಲ್ ಸಮರದಲ್ಲಿ ಹುತಾತ್ಮ ಯೋಧರ ಸೇವೆಯನ್ನು ಸ್ಮರಿಸಿದರು. ಮಡಿಕೇರಿ ರೋಟರಿ ವುಡ್ಸ್ ವತಿಯಿಂದ ನಾಲ್ವರು ಯೋಧರನ್ನು ಸನ್ಮಾನಿಸಲಾಯಿತು. ಮಾಜಿ ಯೋಧ ಜಿ,ಎಸ್ ರಾಜಾರಾಮ್, ಸನ್ಮಾನ ಸ್ವೀಕರಿಸಿ ಮಾತನಾಡಿ,

ಪ್ರತಿಯೊಬ್ಬರು ಜೀವನದಲ್ಲಿ ಒಮ್ಮೆಯಾದರೂ ಕಾರ್ಗಿಲ್ ಪ್ರದೇಶಕ್ಕೆ ಭೇಟಿ ನೀಡಿ ಭಾರತೀಯ ಸೈನಿಕರ ತ್ಯಾಗಬಲಿದಾನ ಅರಿಯಬೇಕು ಎಂದರು. ದ್ರಾಸ್‌ನಲ್ಲಿರುವ ಕಾರ್ಗಿಲ್ ಯೋಧರ ಸ್ಮಾರಕಕ್ಕೆ ಪ್ರಧಾನಿ ನರೇಂದ್ರ ಮೋದಿ ಇಂದು ಪುಷ್ಪಗುಚ್ಛವಿರಿಸಿ ಗೌರವ ನಮನ ಸಲ್ಲಿಸಿದರು.

**<><*<><>*><>**

ಮಹಾತ್ಮಾ ಗಾಂಧಿ ಎಐಸಿಸಿ ಅಧ್ಯಕ್ಷತೆ ವಹಿಸಿದ್ದ ೧೯೨೪ ಬೆಳಗಾವಿ ಅಧಿವೇಶನಕ್ಕೆ ೧೦೦ ವರ್ಷ ತುಂಬಿದ ನೆನಪಿಗಾಗಿ ರಾಜ್ಯದ ಹಲವೆಡೆ ಅರ್ಥಪೂರ್ಣ ಕಾರ್ಯಕ್ರಮಗಳನ್ನು ಆಯೋಜಿಸಲಾಗುವುದು ಎಂದು ಉಪಮುಖ್ಯಮಂತ್ರಿ ಹಾಗೂ ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಹೇಳಿದ್ದಾರೆ. ಬೆಂಗಳೂರಿನ ಕೆಪಿಸಿಸಿ ಕಚೇರಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪಾದಯಾತ್ರೆ ಪರಿಕಲ್ಪನೆ ಮಹಾತ್ಮಾ ಗಾಂಧಿ ಅವರ ಕೊಡುಗೆ. ಕಾಂಗ್ರೆಸ್ ಅಧ್ಯಕ್ಷರಾಗಿ ಅವರು ನೀಡಿದ ಕೊಡುಗೆಯನ್ನು ಪಕ್ಷ ಯಶಸ್ವಿಯಾಗಿ ನಿರ್ವಹಿಸಿದೆ. ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ನೇತೃತ್ವದಲ್ಲಿ ದೇಶಾದ್ಯಂತ ನಡೆದ ಭಾರತ್ ಜೋಡೋ ನ್ಯಾಯ ಯಾತ್ರೆ ಇದಕ್ಕೊಂದು ಉತ್ತಮ ಉದಾಹರಣೆ ಎಂದು ಡಿ.ಕೆ.ಶಿವಕುಮಾರ್ ತಿಳಿಸಿದರು.

**<><*<><>*><>**

ಉತ್ತರ ಕನ್ನಡ ಜಿಲ್ಲೆಯ ಅಂಕೋಲಾ ಬಳಿಯ ಶಿರೂರು ಗುಡ್ಡ ಕುಸಿತ ದುರಂತದಲ್ಲಿ ಕಣ್ಮರೆಯಾದ ಕೇರಳದ ಲಾರಿಯ ಅವಶೇಷಗಳು ಗಂಗಾವಳಿ ನದಿಯ ಆಳದಲ್ಲಿ ಇರುವುದು ಪತ್ತೆಯಾಗಿದೆ ಎಂದು ಉತ್ತರಕನ್ನಡ ಜಿಲ್ಲಾಧಿಕಾರಿ ಕೆ.ಲಕ್ಷ್ಮಿಪ್ರಿಯಾ ತಿಳಿಸಿದ್ದಾರೆ. ಕಾರ್ಯಾಚರಣೆ ಕುರಿತು ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ನೊಯ್ಡಾದಿಂದ ತರಲಾದ ಡ್ರೋನ್ ಆಧಾರಿತ ಶೋಧನ ಯಂತ್ರದ ಸಹಾಯದಿಂದ ತಜ್ಞರು ಲಾರಿಯನ್ನು ಪತ್ತೆ ಹಚ್ಚಿದ್ದಾರೆ. ನದಿ ಮೇಲ್ಮನಲ್ಲಿ ಹಾರಾಟ ನಡೆಸಿದ ಯಂತ್ರ ನಾಲ್ಕು ಕಡೆ ಲೋಹದ ವಸ್ತುಗಳಿರುವುದನ್ನು ಗುರುತಿಸಿದೆ. ನದಿಯ ದಡದಿಂದ ೬೦ ಮೀಟರ್ ದೂರ ಮತ್ತು ೬ ಮೀಟರ್ ಆಳದಲ್ಲಿ ಲಾರಿಯ ಕ್ಯಾಬಿನ್ ಇರುವುದು ದೃಢಪಟ್ಟಿದೆ. ಕಬ್ಬಿಣದ ರೇಲಿಂಗ್, ವಿದ್ಯುತ್ ಟವರ್ ಮಾದರಿಯ ವಸ್ತುಗಳಿರುವುದನ್ನು ಗುರುತಿಸಿದೆ. ಇನ್ನೊಂದು ಕಡೆ ದೊಡ್ಡ ಗಾತ್ರದ ಲೋಹದ ವಸ್ತು ಇರುವುದು ಕೂಡ ಪತ್ತೆಯಾಗಿದೆ. ಲಾರಿ ಕ್ಯಾಬಿನ್ ಗುರುತಿಸಿ ಹೊರತೆಗೆಯಲು ಮುಳುಗು ತಜ್ಞರು ನದಿಗೆ ಇಳಿಯಬೇಕು. ನದಿಯು ಗಂಟೆಗೆ ೬ ನಾಟಿಕಲ್ ಮೈಲಿ ವೇಗದ ರಭಸ ಹೊಂದಿದ್ದು ಮುಳುಗು ತಜ್ಞರು ಇಳಿಯಲು ಅಗತ್ಯ ವಾತಾವರಣ ಇಲ್ಲ. ಹೀಗಾಗಿ ನೌಕದಳದ ಅಧಿಕಾರಿಗಳೊಂದಿಗೆ ಸಮಾಲೋಚಿಸಿ ಪರ್ಯಾಯ ಕಾರ್ಯಾಚರಣೆ ನಡೆಸುವ ಬಗ್ಗೆ ನಿರ್ದರಿಸಲಾಗುವುದು ಎಂದು ಜಿಲ್ಲಾಧಿಕಾರಿ ಹೇಳಿದರು.

**<><*<><>*><>**

ತಮ್ಮ ಕುಟುಂಬಕ್ಕೆ ಮೈಸೂರಿನ ಮುಡಾದಲ್ಲಿ ಬದಲಿ ನಿವೇಶನ ಹಂಚಿಕೆಯಲ್ಲಿ ಕಾನೂನು ಉಲ್ಲಂಘನೆಯಾಗಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಈ ವಿಚಾರದಲ್ಲಿ ಪ್ರತಿಪಕ್ಷಗಳು ಪುರಾವೆ ಆಧಾರವಿಲ್ಲದೇ, ತೇಜೋವಧೆ ಮಾಡುತ್ತಿವೆ ಎಂದು ದಾಖಲೆ ಸಮೇತ ವಿವರಿಸಿದರು. ಮೈಸೂರಿನ ವಿಜಯನಗರ ಬಡಾವಣೆಯಲ್ಲಿ ಬೇರೆಯವರಿಗೆ ಬದಲಿ ನಿವೇಶನ ನೀಡಿರುವಂತೆ ನಮ್ಮ ಕುಟುಂಬಕ್ಕೂ ನೀಡಲಾಗಿದೆ. ಇದರಲ್ಲಿ ಯಾವುದೇ ಅಕ್ರಮ ನಡೆದಿಲ್ಲ ಎಂದು ಸ್ಪಷ್ಟಪಡಿಸಿದರು. ಮೇಲಾಗಿ ನಾವು ಇಂತಹದ್ದೇ ಬಡಾವಣೆಯಲ್ಲಿ ಬದಲಿ ನಿವೇಶನ ಕೊಡಬೇಕೆಂದು ಒತ್ತಾಯ ಮಾಡಿಲ್ಲ ಎಂದು ಹೇಳಿದರು. ವಿಧಾನಮಂಡಲ ಅಧಿವೇಶನದಲ್ಲಿ ಸಾರ್ವಜನಿಕ ಸಮಸ್ಯೆಗಳನ್ನು ಪ್ರಸ್ತಾಪ ಮಾಡುವ ಬದಲಿಗೆ ಪ್ರತಿಪಕ್ಷಗಳು ವೈಯಕ್ತಿಕ ನಿಂದನೆಗೆ ಪಟ್ಟು ಹಿಡಿದಿರುವುದು ದುರದೃಷ್ಟಕರ ಸಂಗತಿ ಎಂದರು.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೬.೪೦ ಕ್ಕೆ <>*><>**